ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ</u>, ಸಿಂಧನೂರು.**

**<u>ಸಿ.ಸಿ.ನಂ.3541/2021</u>**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಕೆ. ವೀರಣ್ಣ** | | |
| **ತಂದೆಃಹೆಸರು** | **ನಿಂಗಪ್ಪ** | **ಪಿಡಬ್ಲೂಃ** | **5** |
| **ವಯಸ್ಸುಃ** | **60 ವರ್ಷ** | **ಸಿಡಬ್ಲೂಃ** | **10** |
| **ಉದ್ಯೋಗಃ** | **ಚಾಲಕ** | | |
| **ವಾಸ ಸ್ಥಳಃ** | **ಮಲ್ಕಾಪುರ** | | |

**<u>ದಿನಾಂಕ 08.01.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ</u>**

ಸಾಕ್ಷಿಗೆ ನಿಪಿ-2 ಸ್ಥಳ ಪಂಚನಾಮೆಯನ್ನು & ನಿಪಿ-12 ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-2 ಸಿ & 12 ಬಿ ಎಂದು ಗುರುತಿಸಲಾಯಿತು. ಫೋಟೋಗಳನ್ನು ನೋಡಿ ಗುರುತಿಸಿರುತ್ತಾರೆ.

ನಾನು ಬೇರೆ ಕೆಲಸಕ್ಕೆಂದು ಠಾಣೆಗೆ ಹೋಗಿದ್ದೆ, ಆ ಕಾಲಕ್ಕೆ ಸಹಿ ಮಾಡಿದ್ದೆ. ನಿಪಿ-2 & 12 ಕ್ಕೆ ಸಹಿಯನ್ನು ಏತಕ್ಕಾಗಿ ಮಾಡಿದೆ ಎಂಬುದು ನನಗೆ ಗೊತ್ತಿಲ್ಲ. ನಿಪಿ-2 & 12 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ**

ದಿಃ 28-02-2021 ರಂದು ಬೆ.12-30 ರಿಂದ 1 ಗಂಟೆಯವರೆಗೆ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನಿಮ್ಮ & ಚಾಸಾ-9 ರವರ ಸಮಕ್ಷಮ ನಿಪಿ-2 ರಂತೆ ಪಂಚನಾಮೆ ಮಾಡಿ, ಫೋಟೋಗಳನ್ನು ತೆಗೆದಿದ್ದರು ಎಂದರೆ ಸರಿಯಲ್ಲ.

ಅದೇ ದಿನ ಮ. 1-30 ರಿಂದ 2-30 ಗಂಟೆಯವರೆಗೆ ನಿಮ್ಮ & ಚಾಸಾ-9 ರವರ ಸಮಕ್ಷಮ ಜಪ್ತಿ ಪಂಚನಾಮೆಯನ್ನು ಸಂಚಾರಿ ಪೋಲೀಸ್ ಠಾಣೆಯ ಆವರಣದಲ್ಲಿ ಮಾಡಿ ಕೆ ಎ 16/ಸಿ 2826 & ಕೆ ಎ 04/ಡಿ-2971 ನ್ನು ನಿಪಿ-12 ರಂತೆ ಜಪ್ತು ಪಡಿಸಿಕೊಂಡು, ಫೋಟೋಗಳನ್ನು ತೆಗೆದಿದ್ದರು ಎಂದರೆ ಸರಿಯಲ್ಲ.

ನಿಪಿ-2 & 12 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಿಂಧನೂರು.